# 1 ನೇ ಹೆಚ್ಚುವರಿ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಮದ್ದೂರು

## ಕ್ರಿಮಿನಲ್ ಪ್ರಕರಣ ಸಂಖ್ಯೆ : 2324/2018

ಪಿರ್ಯಾದುದಾರರು : ಶ್ರೀ.ತಗಡೇಗೌಡ ಡಿ.ಎಂ.
ಬಿನ್ ಮಾದಯ್ಯ, 63 ವರ್ಷ,
ವಾಸ : ದೇಶಹಳ್ಳಿ ಗ್ರಾಮ,
ಕಸಬಾ ಹೋಬಳಿ,
ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ.

**ವಿರುದ್ಧ**

**ಆರೋಪಿತರು - : ಶ್ರೀ.ಶಿವರಾಜ ಕೆ.ಜಿ.**
**ಬಿನ್ ಲೇಟ್ ಗಂಗಾಧರಯ್ಯ, 35 ವರ್ಷ,**
ವಾಸ : ಕುದರಗುಂಡಿ ಗ್ರಾಮ,
ಕಸಬಾ ಹೋಬಳಿ,
ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ.

**ಆಪಾದನೆ**

ಈ ಮೇಲ್ಕಂಡ ಆರೋಪಿಯಾದ ನೀವು ಪಿರ್ಯಾದಿಯವರಿಂದ ಕಾನೂನು ಬದ್ದ ಅವಶ್ಯಕತೆಗಾಗಿ ದಿನಾಂಕ:20.06.2018 ರಂದು ರೂ.2,00,000/- ಹಣವನ್ನು ಸಾಲವಾಗಿ ಪಡೆದಿದ್ದು, ಸದರಿ ಹಣವನ್ನು ಎರಡು ತಿಂಗಳ ಒಳಗಾಗಿ ಮರು ಪಾವತಿಸುವುದಾಗಿ ಒಪ್ಪಿಕೊಂಡಿದ್ದು, ಹಣದ ಪಾವತಿಗಾಗಿ ನಿಮ್ಮ ಸಿಂಡಿಕೇಟ್ ಬ್ಯಾಂಕ್, ಬೆಂಗಳೂರಿನ ಸಿಟಿ ಮಾರ್ಕೆಟ್ ಶಾಖೆಯ ಚೆಕ್ ಸಂಖ್ಯೆ 873475 ಮೊತ್ತ 2,00,000/- ಹಣವನ್ನು ನಮೂದಿಸಿದ್ದು ದಿನಾಂಕ:23.08.2018 ರಂದು ಬ್ಯಾಂಕಿನಿಂದ ಪಡೆದುಕೊಳ್ಳುವಂತೆ ಪಿರ್ಯಾದಿಗೆ ನೀಡಿದ್ದು, ಸದರಿ ಚೆಕ್ ಅನ್ನು ನಗದೀಕರಿಸಲು ಪಿರ್ಯಾದಿಯು ಕೆನರಾ ಬ್ಯಾಂಕ್, ಮದ್ದೂರು ಶಾಖೆಗೆ ಹಾಜರು ಪಡಿಸಿದಾಗ ಸದರಿ ಬ್ಯಾಂಕ್ ನವರು " **Funds Insufficient** " ಎಂಬ ಹಿಂಬರಹದೊಂದಿಗೆ

ದಿನಾಂಕ 17.09.2018 ರಂದು ಸದರಿ ಚೆಕ್ ಅಮಾನ್ಯ ಮಾಡಿದ್ದು, ಆ ಸಂಬಂಧ ಪಿರ್ಯಾದಿಯು ದಿನಾಂಕಃ03.10.2018 ರಂದು ನಿಮಗೆ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ ನಿಮಗೆ ದಿನಾಂಕಃ 10.10.2018 ರಂದು ಖುದ್ದು ಜಾರಿಯಾಗಿದ್ದರೂ ಸಹ ನೀವು ಇದುವರೆವಿಗೂ ಹಣವನ್ನು ಪಾವತಿ ಮಾಡಿರುವುದಿಲ್ಲ. ಆ ಮೂಲಕ ಲಿಖಿತ ವರ್ಗಾವಣೆಗಳ ಅಧಿನಿಯಮ ಕಲಂ-138 ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧ ಎಸಗಿರುವುದಾಗಿ ನಿಮ್ಮ ವಿರುದ್ಧ ಆರೋಪಿಸಲಾಗಿದೆ.

ಪ್ರಶ್ನೆ-1 ಃ ಈ ಮೇಲೆ ಓದಿ ಹೇಳಿದ ಆಪಾದನೆ ನಿಮಗೆ ತಿಳಿಯಿತೇ ?

ಆರೋಪಿ ಉತ್ತರ ಃ

ಪ್ರಶ್ನೆ-2 ಃ ನೀವು ಆಪಾದನೆಯನ್ನು ಒಪ್ಪುಕೊಳ್ಳುತ್ತೀರಾ ಅಥವಾ ಏನಾದರೂ ಹೇಳುವುದಿದೇಯಾ?

ಆರೋಪಿ ಉತ್ತರ ಃ

( ಈ ಮೇಲ್ಕಂಡ ಆರೋಪಿತನ ಹೇಳಿಕೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಹೇಳಿ, ಕೇಳಿ, ಸರಿ ಇದೆ ಎಂದು ನನ್ನ ಸಮಕ್ಷಮ ದಿನಾಂಕಃ 01.07.2024 ರಂದು ಸಹಿ ಮಾಡಿರುತ್ತಾರೆ)

(ನಳಿನ ಎಸ್.ಸಿ.)
1 ನೇ ಹೆಚ್ಚುವರಿ ನ್ಯಾಯಿಕ ದಂಡಾಧಿಕಾರಿ
ಮತ್ತು ಜೆಎಂಎಫ್‌ಸಿ ನ್ಯಾಯಾಲಯ,

**ಆರೋಪಿ ಸಹಿ ಃ**